# ಬೆಂಗಳೂರು ವಿಶ್ವವಿದ್ಯಾಲಯ

ಜ್ಞಾನಭಾರತಿ, ಬೆಂಗಳೂರು-56

ಸಂ.ಕುಸಆ/ಇತರೆ/2019

ದಿನಾಂಕ 07.05.2019

## ಸುತ್ತೋಲೆ

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಸರಸ್ವತಿ ದೇವಿ ಹಾಗೂ ಶ್ರೀ ಭಗವಾನ್ ಬುದ್ಧರ ಪ್ರತಿಮೆ ಪ್ರತಿಷ್ಠಾಪನೆ ವಿಚಾರದಲ್ಲಿ ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಸಭೆಯಲ್ಲಿ ಈ ಕೆಳಕಂಡಂತೆ ತೀರ್ಮಾನವಾಗಿರುತ್ತದೆ.

1. **ಪ್ರಸ್ತುತ ಸ್ಥಾಪನೆಯಾಗಿರುವ ಬುದ್ಧರ ವಿಗ್ರಹವನ್ನು ಸರಸ್ವತಿ ದೇವಿಯ ಪಕ್ಕದಲ್ಲಿ ಗೌರವಾನ್ವಿತವಾಗಿ ಇರಿಸಲು ಸರ್ವಾನುಮತಿಯಿಂದ ತೀರ್ಮಾನಿಸಲಾಗಿರುತ್ತದೆ.**
2. **ಈ ಹಿಂದೆ ಸ್ಥಾಪಿಸಲಾಗಿದ್ದ ಮೂಲ ಸ್ಥಳದಲ್ಲಿ ಸರಸ್ವತಿ ದೇವಿಯ ವಿಗ್ರಹವನ್ನು ಯಥಾಸ್ಥಿತಿ ಪ್ರತಿಷ್ಠಾಪಿಸಲಾಗುವುದು. ಅದಕ್ಕೆ ಸಮಾನಂತರವಾಗಿ ಪ್ರತ್ಯೇಕ ಪೀಠವನ್ನು ನಿರ್ಮಿಸಿ ಬುದ್ಧರ ವಿಗ್ರಹವನ್ನು ಪ್ರತಿಷ್ಠಾಪಿಸಲಾಗುವುದು.**
3. **ಈ ಎರಡೂ ವಿಗ್ರಹಗಳ ತೂಕವನ್ನು ಕಾಯ್ದುಕೊಳ್ಳುವಂತೆ ತಾಂತ್ರಿಕ (ಸಿವಿಲ್) ವ್ಯಕ್ತಿಗಳ ಸಲಹೆ ಪಡೆದು ಕಟ್ಟಡಕ್ಕೆ ಯಾವುದೇ ಹಾನಿಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು.**
4. **ಪ್ರತ್ಯೇಕ ಪೀಠ ಸ್ಥಾಪಿಸುವ ಅವಶ್ಯಕತೆ ಇರುವುದರಿಂದ ಬುದ್ಧರ ಪ್ರತಿಮೆಯನ್ನು ಸುರಕ್ಷಿತವಾಗಿ ಕಾಪಾಡಿಕೊಳ್ಳಲಾಗುವುದು.**
5. **ಎರಡೂ ಪೀಠಗಳ ನಿರ್ಮಾಣದ ನಂತರ ಸರಸ್ವತಿ ದೇವಿ ಮತ್ತು ಬುದ್ದರ ವಿಗ್ರಹಗಳನ್ನು ಏಕಕಾಲಕ್ಕೆ ಪ್ರತಿಷ್ಠಾಪಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು.**

ಆದ್ದರಿಂದ, ವಿಶ್ವವಿದ್ಯಾಲಯದ ಎಲ್ಲಾ ಶಿಕ್ಷಕರು, ಶಿಕ್ಷಕೇತರ ನೌಕರರು ಹಾಗೂ ವಿದ್ಯಾರ್ಥಿಗಳು ಯಾವುದೇ ಅಹಿತಕರ ಘಟನೆಗೆ ಎಡೆಮಾಡಿಕೊಡದೆ ಶಾಂತಿ ಮತ್ತು ಸಹನೆಯಿಂದ ಇದ್ದು ಮುಂದಿನ ಕಾರ್ಯಕಲಾಪಗಳನ್ನು ಅನುಷ್ಠಾನಗೊಳಿಸಲು ಸಹಕರಿಸಬೇಕಾಗಿ ಕೋರಲಾಗಿದೆ.

ಕುಲಸಚಿವರು 7/5/2019

**ಗೆ,**

ವಿಶ್ವವಿದ್ಯಾಲಯದ ಎಲ್ಲಾ ಶಾಸನಬದ್ಧ ಅಧಿಕಾರಿಗಳಿಗೆ
ವಿಶ್ವವಿದ್ಯಾಲಯದ ಎಲ್ಲಾ ಶಿಕ್ಷಕರು, ಶಿಕ್ಷಕೇತರ ನೌಕರರು ಹಾಗೂ ವಿದ್ಯಾರ್ಥಿಗಳು

**ಪ್ರತಿ:**

1. ಬೆಂಗಳೂರು ನಗರ ಪೊಲೀಸ್ ಆಯುಕ್ತರು, ಇನ್‌ಫ್ಯಾನ್‌ಟ್ರಿ ರಸ್ತೆ, ಬೆಂಗಳೂರು-560001
2. ಅಪರ ಮುಖ್ಯಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂ-560001.
3. ಉಪಪೋಲಿಸ್ ಆಯುಕ್ತರು, ಬೆಂಗಳೂರು ನಗರ (ಪಶ್ಚಿಮ), ಉಪ್ಪಾರಪೇಟೆ ಪೋಲೀಸ್ ಠಾಣೆ, ಬೆಂಗಳೂರು
4. ಠಾಣಾಧಿಕಾರಿಗಳು, ಜ್ಞಾನಭಾರತಿ ಪೋಲಿಸ್ ಠಾಣೆ, ಬೆಂಗಳೂರು-560056.